ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಸ್ವಚ್ಛ ಭಾರತ ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ | ಸ್ವಚ್ಛ ಸಂಕೀರ್ಣ | ಸ್ವಚ್ಛಮೇವ ಜಯತೇ SWACHHA MEVA JAYATE | ಜಲೋತ್ಸವ ಮನೆ ಮನೆಗೆ ಗಂಗೆ | ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್

# ಸಮರ್ಪಕ ಘನತ್ಯಾಜ್ಯ ವಿಲೇವಾರಿಗೆ ಶ್ರಮಿಸುತ್ತಿರುವ ಕಡೇಶ್ವಾಲ್ಯ ಮಹಿಳೆಯರ ಗುಂಪು




ದಕ್ಷಿಣ ಕನ್ನಡ ಜಿಲ್ಲೆ, ಬಂಟ್ವಾಳ ತಾಲೂಕಿನ ಕಡೇಶ್ವಾಲ್ಯ ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 1196 ಮನೆಗಳಿವೆ. ಈ ಗ್ರಾಮದಲ್ಲಿ ಇದ್ದ ಅತೀ ದೊಡ್ಡ ಸಮಸ್ಯೆ ಎಂದರೆ ಘನತ್ಯಾಜ್ಯ ವಿಲೇವಾರಿ. ಮನೆಮನೆಯಿಂದ ತ್ಯಾಜ್ಯವನ್ನು ಸಂಗ್ರಹಿಸಿ ಅದರ ನಿರ್ವಹಣೆಗಾಗಿ ಹಲವಾರು ದಾರಿಗಳನ್ನು ಕಂಡುಕೊಂಡರು ಕೂಡ ನಿರೀಕ್ಷಿತ ಪ್ರಮಾಣದಲ್ಲಿ ಯಶಸ್ಸು ಸಿಕ್ಕಿರಲಿಲ್ಲ.

ಈ ಹಂತದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸ್ವಚ್ಛ ಗ್ರಾಮ ಯೋಜನೆಯಡಿ ಪ್ರತೀ ಗ್ರಾಮ ಪಂಚಾಯತ್ ಮಟ್ಟದಲ್ಲಿ ಘನ-ದ್ರವ ತ್ಯಾಜ್ಯ ವಲೇವಾರಿ ಘಟಕಗಳನ್ನು ಸ್ಥಾಪಿಸಲು ಮುಂದಾಯಿತು. ಇಲಾಖೆಯ ಈ ನಡೆ ಕಡೇಶ್ವಾಲ್ಯ ಗ್ರಾಮ ಪಂಚಾಯಿತಿಯ ಚಿತ್ರಣವನ್ನೇ ಬದಲು ಮಾಡಿತು.

ಇನ್ನು ಕಡೇಶ್ವಾಲ್ಯ ಗ್ರಾ,ಪಂ ಯಲ್ಲಿ ತ್ಯಾಜ್ಯದ ಸಮರ್ಪಕ ವಿಲೇವಾರಿಯ ಹಿಂದಿರುವ ಮಹತ್ವದ ಕೊಡುಗೆ ಮಾತ್ರ ಸಂಜೀವಿನಿ ಒಕ್ಕೂಟ. ತ್ಯಾಜ್ಯ ವಿಲೇವಾರಿಗಾಗಿ 2021 ರಲ್ಲಿ ನಿರ್ಮಾಣಗೊಂಡಿರುವ ಸ್ವಚ್ಛ ಸಂಕೀರ್ಣ ಘಟಕವನ್ನು ಗ್ರಾಮ ಪಂಚಾಯಿತಿಯ ಮಾತ್ರ ಸಂಜೀವಿನಿ ಒಕ್ಕೂಟ ನಿರ್ವಹಿಸುತ್ತಿದ್ದು, ಇಡೀ ಗ್ರಾಮದ ಸ್ವಚ್ಛತಾ ಕಾರ್ಯವನ್ನು ಮಹಿಳೆಯರ ಗುಂಪು ಯಶಸ್ವಿಯಾಗಿ ಮುನ್ನಡೆಸುತ್ತಿದ್ದಾರೆ. ಮಾತ್ರ ಸಂಜೀವಿನಿ ಒಕ್ಕೂಟದವರ ಈ ಮಹತ್ಕಾರ್ಯ ಪ್ರಸ್ತುತ ರಾಜ್ಯಮಟ್ಟದಲ್ಲಿ ಗಮನಸೆಳೆದಿದೆ.

ಶ್ಯಾಮಲಾ ಶೆಟ್ಟಿಯವರು ಅಧ್ಯಕ್ಷರಾಗಿರುವ ಕಡೇಶ್ವಾಲ್ಯ ಗ್ರಾಮ ಪಂಚಾಯಿತಿಯ ಮಾತ್ರಸಂಜೀವಿನಿ ಒಕ್ಕೂಟದಲ್ಲಿ 25 ಮಹಿಳಾ ಸ್ವಸಹಾಯ ಗುಂಪುಗಳಿದ್ದು, ಕಾರ್ಯದರ್ಶಿ, ಕೋಶಾಧಿಕಾರಿ ಸೇರಿದಂತೆ 10 ಮಂದಿ ಪದಾಧಿಕಾರಿಗಳು, ಸದಸ್ಯರು ಕ್ರಿಯಾಶೀಲತೆಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ.

## ಇಬ್ಬರು ಚಾಲಕಿಯರು, ಓರ್ವ ತ್ಯಾಜ್ಯ ಸಂಗ್ರಾಹಕಿ

ಕಡೇಶ್ವಾಲ್ಯ ಗ್ರಾ.ಪಂ.ನ ಸ್ವಚ್ಛ ಸಂಕೀರ್ಣ ಘಟಕಕ್ಕೆ ಸಂಬಂಧಿಸಿ ಮೂವರು ಮಹಿಳೆಯರು ಕೆಲಸ ನಿರ್ವಹಿಸುತ್ತಿದ್ದಾರೆ. ಜಿಲ್ಲೆಯ ಪ್ರಥಮ ಮಹಿಳಾ ಚಾಲಕಿ ಶ್ರೀಮತಿ ಲಕ್ಷ್ಮೀ ಹಾಗೂ ಮತ್ತೋರ್ವ ಚಾಲಕಿ ಪ್ರಮೀಳಾ ರವರು ಎರಡು ದಿನಕ್ಕೊಮ್ಮೆ ತ್ಯಾಜ್ಯ ಸಂಗ್ರಹ ಹಾಗೂ ಚಾಲಕರ ಕೆಲಸವನ್ನು ಪಾಳಿಯಲ್ಲಿ ನಿರ್ವಹಿಸಿದರೆ, ಸವಿತಾ ರವರು ಕಸ ವಿಂಗಡಿಸುವ ಕೆಲಸ ಮಾಡುತ್ತಿದ್ದಾರೆ.

ಜಿಲ್ಲಾ ಮಟ್ಟದ ಹಲವು ತಂಡಗಳು ಈ ಘಟಕದ ಕಾರ್ಯವೈಖರಿಯ ಬಗ್ಗೆ ಅಧ್ಯಯನ ನಡೆಸುತ್ತಿದ್ದು ಗ್ರಾಮ ಪಂಚಾಯಿತಿಗೆ ಹೆಮ್ಮೆಯ ಸಂಗತಿಯಾಗಿದೆ.



ಗ್ರಾಮ ಪಂಚಾಯಿತಿಯ ಸ್ವಚ್ಛತಾ ಕಾರ್ಯವನ್ನು ಯಶಸ್ವಿಯಾಗಿಸುವುದರ ಜೊತೆಗೆ ಜನರಿಗೆ ಸ್ವಚ್ಛತೆಯ ಮಹತ್ವದ ಬಗ್ಗೆಯೂ ಮಾಹಿತಿ ನೀಡಿ ಮಾತ್ರ ಸಂಜೀವಿನಿ ಒಕ್ಕೂಟದ ಮಹಿಳೆಯರು ಪ್ರತಿಯೊಬ್ಬರಿಗೂ ಮಾದರಿಯಾಗಿದ್ದಾರೆ.

**ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಪಟ್ಟ ಸಮಸ್ಯೆಗಳಿದ್ದಲ್ಲಿ ಕರೆ ಮಾಡಿ: 9480985555**